ಹೊಳೆಹೊನ್ನೂರು ಕ್ಷೇತ್ರಕ್ಕೆ ಬರುವ 21 ಗ್ರಾಮ ಪಂಚಾಯಿತಿಗಳಿಗೆ ಸಮರ್ಪಕವಾಗಿ ವಿದ್ಯುತ್ ಇಲ್ಲದಿರುವುದು.

1658(1987)

ಶ್ರೀ ಕರಿಯಣ್ಣ(ಹೊಳೆಹೊನ್ನೂರು): ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ (ಹೊಳೆಹೊನ್ನೂರು ಕ್ಷೇತ್ರಕ್ಕೆ ಬರುವ) ಸುಮಾರು 21 ಗ್ರಾಮ ಪಂಚಾಯ್ತಿಗಳಿಗೆ ಸಮರ್ಪಕವಾಗಿ ವಿದ್ಯುಚ್ಛಕ್ತಿ ಇರುವುದಿಲ್ಲ ಮತ್ತು ವೋಲ್ಟೇಜ್ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಇದರಿಂದ ಈ ವಿಭಾಗದ ಕುಡಿಯುವ ನೀರಿನ ಮೋಟಾರುಗಳು ಮತ್ತು ನೀರಾವರಿ ಪಂಪುಗಳು ಸಮರ್ಪಕವಾಗಿ ಕೆಲಸ ಮಾಡದೆ ರೈತರಿಗೆ ತೊಂದರೆಯಾಗಿರುವುದು ನಿಜವಲ್ಲವೆ;

ಇ) ವೋಲ್ಟೇಜ್ ಕಡಿಮೆಯಿಂದಾಗಿ ಹಿಟ್ಟಿನ ಗಿರಣಿಗಳು ನಡೆಯದಿರುವುದು ಮನೆ ಹಾಗೂ ಬೀದಿ ದೀಪಗಳ ಮಂದ ಬೆಳಕಿನಿಂದಾಗಿ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿದ್ದು ಇದನ್ನು ಸರಿಪಡಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ?

ಶ್ರೀ ವೀರಕುಮಾರ್ ಆ.ಪಾಟೀಲ್ (ಇಂಧನ ರಾಜ್ಯ ಸಚಿವರು):

ಅ) ಹೌದು ಬಂದಿದೆ. ಅದರ ಕಡಿಮೆ ವೋಲ್ಟೇಜ್‌ನ ಪರಿಸ್ಥಿತಿಗೆ ನೀರಾವರಿ ಪಂಪುಸೆಟ್ಟುಗಳಿಗೆ

ಆ) ಅನಧಿಕೃತವಾಗಿ ವಿದ್ಯುತ್ತನ್ನು ಬಳಕೆ ಮಾಡುತ್ತಿರುವುದೂ ಒಂದು ಮುಖ್ಯ ಕಾರಣವಾಗಿದೆ. ಆದಾಗ್ಯೂ ಕುಡಿಯುವ ನೀರಿನ ಸ್ಥಾವರಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗದಂತೆ ಎಚ್ಚರ ವಹಿಸಲಾಗುತ್ತಿದೆ.

ಇ) ವೋಲ್ಟೇಜ್‌ನ ಸುಧಾರಣೆಗಾಗಿ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.

1. ಅನಧಿಕೃತ ನೀರಾವರಿ ಪಂಪುಸೆಟ್ಟುಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲು ಕಟ್ಟುನಿಟ್ಟಿನ ಕ್ರಮವನ್ನು ಜಾರಿಗೊಳಿಸಲಾಗಿದೆ.

2. 24 ಗ್ರಾಮಗಳಲ್ಲಿ ಹೆಚ್ಚುವರಿಯಾಗಿ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಲಾಗುತ್ತಿದೆ.

3. ಗೊಪ್ಪೇನಹಳ್ಳಿಯಲ್ಲಿರುವ 66:11 ಕೆ.ವಿ. ವಿದ್ಯುತ್ ಸಬ್-ಸ್ಟೇಷನ್ನಿನಲ್ಲಿ ಕೆ.ಎಂ.ವಿ.ಎ. ಸಾಮರ್ಥ್ಯದ ಪವರ್ ಟ್ರಾನ್ಸ್‌ಫಾರ್ಮರ್‌ನ್ನು ಹೆಚ್ಚುವರಿಯಾಗಿ ಅಳವಡಿಸಿ ಸದರೀ, ವಿದ್ಯುತ್ ಸಬ್ ಸ್ಟೇಷನ್ನಿನ ಸಾಮರ್ಥ್ಯವನ್ನು ಹೆಚ್ಚಳಗೊಳಿಸುವ ಕಾರ್ಯ ಪ್ರಗತಿಯಲ್ಲಿದೆ.

ಅಲ್ಲದೇ ಮಾವಿನಕಟ್ಟೆ ಗ್ರಾಮದಲ್ಲಿ ಒಂದು 66:11 ಕೆ.ವಿ ವಿದ್ಯುತ್ ಸಬ್-ಸ್ಟೇಷನನ್ನು ನಿರ್ಮಾಣ ಮಾಡಲು ಉದ್ದೇಶಿಸಿದೆ.

ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಸ ತೆಗೆಯುವ ಗುತ್ತಿಗೆದಾರರ ಕುರಿತು.

1659(1985)

ಶ್ರೀ ಕರಿಯಣ್ಣ(ಹೊಳೆಹೊನ್ನೂರು): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಸ ತೆಗೆಯುವ ಸ್ವಚ್ಛತಾ ಕಾಮಗಾರಿಗಳನ್ನು ಎಷ್ಟು ಜನ ಗುತ್ತಿಗೆದಾರರಿಗೆ ಕೂಡಲಾಗಿದೆ? ಇದರಿಂದ ವರ್ಷಕ್ಕೆ ಎಷ್ಟು ಹಣ ಖರ್ಚು ಬರುತ್ತದೆ ಎಂಬುದನ್ನು ಹಿಂದಿನ ವರ್ಷದ ಅಂಕೆಗಳನ್ನು ಕೊಡುವುದು?

ಆ) ಈ ಗುತ್ತಿಗೆದಾರರು ಯಾವ ಜಾತಿಯ ಜನರಿಂದ ಈ ಕೆಲಸವನ್ನು ಮಾಡಿಸುತ್ತಿರುವವರು? ಇವರಿಗೆ ತಿಂಗಳಿಗೆ ಎಷ್ಟು ಹಣ ಕೊಡುತ್ತಾರೆ? (ಸಂಬಳ ಅಥವಾ ಕೂಲಿ) ಮತ್ತು ಎಷ್ಟು ಜನ ಕೆಲಸ ಮಾಡುವರು (ವಿವರ ಒದಗಿಸುವುದು)?

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಗಳು):

ಅ) 130 ವರ್ಷಕ್ಕೆ ರೂ.19,40,76,236-00

ಆ) ಸ್ವಚ್ಛತೆಯ ಕೆಲಸವನ್ನು ನಿರ್ವಹಿಸಲು ಯಾವ ಜಾತಿಯಿಂದ ಜನರು ಬರುತ್ತಾರೋ ಅಂತಹವರಿಂದ ಕೆಲಸ ಮಾಡಿಸಲಾಗುತ್ತಿದೆ. ಒಟ್ಟು 6320 ಜನ ಸ್ವಚ್ಛತಾ ಕೆಲಸವನ್ನು ನಿರ್ವಹಿಸುತ್ತಿದ್ದಾರೆ. ಇವರುಗಳಿಗೆ ಲೇಬರ್ ಕಾಂಟ್ರಾಕ್ಟ್